**ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ**

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

24

ಇಲಾಖೆ / ವಿಷಯ : DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ          ದಿನಾಂಕ : DATE: 28/9/20

## ಕೇಂದ್ರದ ಮಾಜಿ ಸಚಿವ ಜಸ್ವಂತ್ ಸಿಂಗ್ ನಿಧನ

ಉ.ವಾ 28/9/20

**ನವದೆಹಲಿ:** ಕೇಂದ್ರದ ಮಾಜಿ ಸಚಿವ, ಬಿಜೆಪಿಯ ಸಂಸ್ಥಾಪಕ ಸದಸ್ಯರಾಗಿದ್ದ ಜಸ್ವಂತ್ ಸಿಂಗ್ (82) ಭಾನುವಾರ ನಿಧನರಾಗಿದ್ದಾರೆ. ಅವರು ದೀರ್ಘ ಕಾಲದಿಂದ ಅಸ್ವಸ್ಥರಾಗಿದ್ದರು ಮತ್ತು ಕೋಮಾದಲ್ಲಿದ್ದರು.



ವಾಜಪೇಯಿ ಸಂಪುಟದಲ್ಲಿ ರಕ್ಷಣೆ, ವಿದೇಶಾಂಗ ಸಚಿವರಾಗಿದ್ದರು. ಅವರು ಪತ್ನಿ ಶೀತಲ್ ಕೌರ್, ಇಬ್ಬರು ಪುತ್ರರನ್ನು ಅಗಲಿದ್ದಾರೆ. 2014ರ ಆಗಸ್ಟ್‌ನಲ್ಲಿ ನವದೆಹಲಿಯ ನಿವಾಸದ ಸ್ನಾನದ ಮನೆಯಲ್ಲಿ ಜಾರಿ ಬಿದ್ದಿದ್ದರು. ಇದಾದ ಬಳಿಕ ಜಸ್ವಂತ್ ಆರೋಗ್ಯದಲ್ಲಿ ಚೇತರಿಕೆ ಕಂಡುಬರಲಿಲ್ಲ, ಜೂನ್‌ನಲ್ಲಿ ಮತ್ತೆ ಅವರನ್ನು ಆಸ್ಪತ್ರೆಗೆ ದಾಖಲಿಸಲಾಗಿತ್ತು. ಜೋಧ್‌ಪುರದಲ್ಲಿ ಅವರ ಅಂತ್ಯಸಂಸ್ಕಾರ ನೆರವೇರಿತು. ಸಿಂಗ್ ನಿಧನಕ್ಕೆ ರಾಷ್ಟ್ರಪತಿ ರಾಮನಾಥ ಕೋವಿಂದ್, ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ರಾಜಕೀಯ ಕ್ಷೇತ್ರದ ವಿವಿಧ ಗಣ್ಯರು ಶೋಕ ವ್ಯಕ್ತಪಡಿಸಿದ್ದಾರೆ.